# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5)ಪಿಆರ್/15/21-22

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 02-8-2021

## ಸುತ್ತೋಲೆ

ವಿಷಯ: ಆಡಳಿತ ಶಾಖೆಯಿಂದ ಮರುಸ್ಥಳನಿಯುಕ್ತಿ ಆದೇಶ ಹೊರಡಿಸಿದ ನಂತರವೇ ಅಧಿಕಾರಿ / ಸಿಬ್ಬಂದಿಗಳು ಕರ್ತವ್ಯದ ಮೇಲೆ ಹಾಜರಾಗುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದಿಂದ ಆಡಳಿತಾತ್ಮಕ ವಿಷಯಗಳು ಸೇರಿದಂತೆ ಅನೇಕ ಆದೇಶಗಳನ್ನು ಹೊರಡಿಸಲಾಗುತ್ತಿರುತ್ತದೆ. ಸದರಿ ಆದೇಶಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅನುಷ್ಠಾನಗೊಳಿಸುವ ಪೂರ್ವದಲ್ಲಿ ಆದೇಶಗಳನ್ನು ಪರಾಮರ್ಶಿಸಿ ಪಾಲಿಸಬೇಕಾಗಿರುತ್ತದೆ. ಈ ಹಿನ್ನಲೆಯಲ್ಲಿ ರಾಜ್ಯ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಆದೇಶಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅನುಷ್ಠಾನಗೊಳಿಸುವ ಮೊದಲು ಮುಖ್ಯ ಆಯುಕ್ತರ ಗಮನಕ್ಕೆ ತಂದು ಅಗತ್ಯ ಅನುಮೋದನೆ ಪಡೆದ ನಂತರ ಕರ್ತವ್ಯದ ಮೇಲೆ ಹಾಜರಾಗಬೇಕಾಗಿರುತ್ತದೆ.

ಆದುದರಿಂದ, ಇನ್ನು ಮುಂದೆ ಪಾಲಿಕೆಯ ಎಲ್ಲಾ ಅಧಿಕಾರಿ / ಸಿಬ್ಬಂದಿಗಳು / ಅಭಿಯಂತರರುಗಳು ಸರ್ಕಾರದಿಂದ ಹೊರಡಿಸುವ ಮುಂಬಡ್ತಿ / ವರ್ಗಾವಣೆ ಆದೇಶಗಳನ್ವಯ ಕರ್ತವ್ಯಕ್ಕೆ ಹಾಜರಾಗಬೇಕಾದಲ್ಲಿ ಆಡಳಿತ ಶಾಖೆಯಿಂದ ಸೂಕ್ತ ಮರು ಸ್ಥಳನಿಯುಕ್ತಿ ಆದೇಶ ಹೊರಡಿಸಿದ ನಂತರವೇ ಕರ್ತವ್ಯಕ್ಕೆ ಹಾಜರಾಗಬೇಕೆಂದು ಆದೇಶಿಸಿದೆ ಹಾಗೂ ಅಪರ / ಜಂಟಿ ಆಯುಕ್ತರುಗಳು / ಇಲಾಖಾ ಮುಖ್ಯಸ್ಥರುಗಳೂ ಸಹ ಆಡಳಿತ ಶಾಖೆಯಿಂದ ಆದೇಶ ಹೊರಡಿಸಿದ ನಂತರವೇ ತಮ್ಮ ಹಂತದಲ್ಲಿ ಮುಂದಿನ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದೆ.

ಈ ಆದೇಶದಂತೆ ಆಡಳಿತ ಶಾಖೆಯಿಂದ ಆದೇಶ ಹೊರಡಿಸದೇ ಇದ್ದರೂ ಕರ್ತವ್ಯಕ್ಕೆ ಹಾಜರಾದಲ್ಲಿ ಹಾಗೂ ಅಪರ / ಜಂಟಿ ಆಯುಕ್ತರುಗಳು / ಇಲಾಖಾ ಮುಖ್ಯಸ್ಥರುಗಳು ತಮ್ಮ ಹಂತದಲ್ಲಿಯೇ ಕ್ರಮ ಕೈಗೊಂಡ ಪಕ್ಷದಲ್ಲಿ ಸಂಬಂಧಪಟ್ಟವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು.

ಮುಖ್ಯ ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

4/21
23/9/21

**ಪ್ರತಿಯನ್ನು:**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಆಡಳಿತ) / (ಯೋಜನೆ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ವಲಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ವಲಯ ಅಪರ / ಜಂಟಿ ಆಯುಕ್ತರು ರವರುಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಎಲ್ಲಾ ವಲಯ ಬಟವಾಡೆ ಅಧಿಕಾರಿಗಳಿಗೆ ಮಾಹಿತಿಗಾಗಿ ಕಳುಹಿಸಿದೆ.
: ಎಲ್ಲಾ ವಲಯ ಇಲಾಖಾ ಮುಖ್ಯಸ್ಥರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಮಾಹಿತಿ ತಂತ್ರಜ್ಞಾನ ಸಲಹೆಗಾರರು ರವರಿಗೆ ಕಳುಹಿಸುತ್ತಾ, ಸದರಿ ಸುತ್ತೋಲೆ ಪ್ರತಿಯನ್ನು ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.
: ಸಹಾಯಕ ಕಂದಾಯ ಅಧಿಕಾರಿ ಮುಖ್ಯ ಆಯುಕ್ತರ ಕಛೇರಿ. ಹಾಗೂ ಹೆಚ್.ಆರ್.ಎಂ.ಎಸ್ ಮೇಲುಸ್ತುವಾರಿ ರವರಿಗೆ ಕಳುಹಿಸುತ್ತಾ, ಆಡಳಿತ ಶಾಖೆಯ ಆದೇಶವಿದ್ದಲ್ಲಿ ಮಾತ್ರ ಹೆಚ್.ಆರ್.ಎಂ.ಎಸ್ ತಂತ್ರಾಂಶದಲ್ಲಿ ಅಗತ್ಯ ಬದಲಾವಣೆಗಳನ್ನು ಮಾಡಲು ಸೂಚಿಸಿದೆ.
: ಕಛೇರಿ ಪ್ರತಿ.

I.T.